## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/02/ಇಎಸ್‌ಟಿ(9)/2018/2686

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 08/01/2019.

### ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 658 ಸೇನೆನಿ 2018 ದಿನಾಂಕ:27/12/2018ರ ಪ್ರತಿಯನ್ನು ಲಗತ್ತಿಸಿ ಕಳುಹಿಸಿಕೊಡಲಾಗಿದೆ. ಈ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈ ಕೆಳಕಂಡವರಿಗೆ ಸೂಚಿಸಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್‌ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ ಕೆ.ಜಿ.ಎಫ್.ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರು/ಆಡಳಿತ ಮಂಡಳಿ, ಅತೀ ಶೀಘ್ರದಲ್ಲಿ ಒಂದು ತಿಂಗಳೊಳಗೆ ಅಗತ್ಯ ಕ್ರಮ ಜರುಗಿಸದಿದ್ದಲ್ಲಿ ತಮ್ಮ ಸಂಸ್ಥೆಗಳಿಗೆ ನೀಡುವ ವೇತನಾನುದಾನವನ್ನು ನಿಲ್ಲಿಸಲಾಗುವುದು.
3. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
4. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
5. ನಿರ್ದೇಶಕರ ಆಪ್ತ ಶಾಖೆಗೆ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ನಿರ್ದೇಶಕರು

Sh-est(9) Endsmnt

158910

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 658 ಸೇನೆನಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:27.12.2018

## ಸುತ್ತೋಲೆ

ವಿಷಯ: ಬ್ಯಾಕ್‌ಲಾಗ್ ಹುದ್ದೆಗಳನ್ನು ಹಾಗೂ ರೋಸ್ಟರ್ ರಿಜಿಸ್ಟರ್ ಮತ್ತು ರಿಕ್ತ ಸ್ಥಾನಗಳ ರಿಜಿಸ್ಟರನ್ನು ನಿರ್ವಹಿಸುವ ಬಗ್ಗೆ.

ಉಲ್ಲೇಖ: 1. ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 42 ಎಸ್‌ಆರ್‌ಆರ್ 82, ದಿನಾಂಕ: 25.01.1984.
2. ಸುತ್ತೋಲೆ ಸಂಖ್ಯೆ: ಸಿಆಸುಇ 34 ಸೇನೆನಿ 2010, ದಿನಾಂಕ:28.5.2010.
3. ಸುತ್ತೋಲೆ ಸಂಖ್ಯೆ: ಸಿಆಸುಇ 230 ಸೇನೆನಿ 2015, ದಿನಾಂಕ:14.8.2015.
4. ಸುತ್ತೋಲೆ ಸಂಖ್ಯೆ: ಸಿಆಸುಇ 626 ಸೇನೆನಿ 2018, ದಿನಾಂಕ:17.9.2018.
5. ಮಾನ್ಯ ಸಮಾಜ ಕಲ್ಯಾಣ ಸಚಿವರು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಬರೆದಿರುವ ದಿನಾಂಕ: 19.11.2018ರ ಪತ್ರ.

*~*~*~*~*~*

JD (Admn)/AD01 K (Admn)
EB1 / EB4A/4B

1. ರಾಜ್ಯ ಸಿವಿಲ್ ಸೇವೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಿಂಬಾಕಿ (ಬ್ಯಾಕ್‌ಲಾಗ್) ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಉಸ್ತುವಾರಿಗಾಗಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದೆ. ಈ ಸಚಿವ ಸಂಪುಟ ಉಪಸಮಿತಿಯು ಆಗಿಂದಾಗ್ಗೆ ಸಭೆ ಸೇರಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿರುವ ಬಗ್ಗೆ ವಿವರಗಳನ್ನು ಪರಿಶೀಲಿಸಿ ಸೂಕ್ತ ನಿರ್ದೇಶನಗಳನ್ನು ನೀಡುತ್ತಿದೆ. ದಿನಾಂಕ: 17.10.2018ರಂದು ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಉಪಸಮಿತಿ ಸಭೆಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ಹಲವಾರು ಇಲಾಖಾ ಮುಖ್ಯಸ್ಥರು ನಿರ್ಲಕ್ಷ್ಯತೆಯನ್ನು ತೋರುತ್ತಿರುವುದು ಕಂಡುಬಂದಿರುವುದರಿಂದ ಬಾಕಿ ಉಳಿದಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಹಲವು ನಿರ್ಣಯಗಳನ್ನು ಕೈಗೊಂಡಿದೆ.

2. ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದೇ ಇದ್ದಲ್ಲಿ, ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) 1990ರ ಅಧಿನಿಯಮದ ಕಲಂ 5ರ ಪ್ರಕಾರ ಸದರಿ ಅಧಿನಿಯಮ ಅಥವಾ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳನ್ನು ಉಲ್ಲಂಘಿಸಿ, ಯಾವೊಬ್ಬ ನೇಮಕಾತಿ ಪ್ರಾಧಿಕಾರಿಯು ನೇಮಕ ಮಾಡಿದರೆ ಅಥವಾ ವಿಶ್ವವಿದ್ಯಾನಿಲಯದಲ್ಲಿ ಅಥವಾ ಶಿಕ್ಷಣ ಸಂಸ್ಥೆಯಲ್ಲಿ ಯಾವುದೇ ವ್ಯಾಸಂಗ ಕ್ರಮಕ್ಕೆ ಪ್ರವೇಶಾವಕಾಶ ನೀಡುವ ಯಾವೊಬ್ಬ ಪ್ರಾಧಿಕಾರಿಯು ಅಂಥ ಪ್ರವೇಶಾವಕಾಶ ನೀಡಿದರೆ, ಅಂತಹವರನ್ನು ಒಂದು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆ ಮತ್ತು 6 ತಿಂಗಳವರೆಗೆ ವಿಸ್ತರಿಸಬಹುದಾದ ಅವಧಿಯ

..2..

27/12/18

ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿರುತ್ತದೆ. ಮುಂದುವರೆದು, ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ನಿಯಮಗಳು 1992ರ ನಿಯಮ 10(4)ರನ್ವಯ ನೇಮಕಾತಿ ಪ್ರಾಧಿಕಾರವನ್ನು ಕಾನೂನು ಕ್ರಮಕ್ಕೂ ಸಹ ಗುರಿಪಡಿಸಲು ಅವಕಾಶವಿರುತ್ತದೆ.

3. ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವಾಗ ಜಾರಿಯಲ್ಲಿರುವ ನೇರ ನೇಮಕಾತಿ ಮೀಸಲಾತಿಯನ್ನು ಅನುಸರಿಸಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಒದಗಿಸಿರುವ ಮೀಸಲಾತಿಯನ್ನು ಅನುಷ್ಠಾನಗೊಳಿಸಿರುವ ಬಗ್ಗೆ ನಮೂನೆ-1 ಮತ್ತು 2ರಲ್ಲಿ ನಿಗದಿಪಡಿಸಿರುವಂತೆ ರಿಕ್ತ ಸ್ಥಾನಗಳ ರಿಜಿಸ್ಟರನ್ನು ನಿರ್ವಹಿಸುವಂತೆ ಉಲ್ಲೇಖಿತ (1)ರಿಂದ (4)ರವರೆಗಿನ ಅಧಿಕೃತ ಜ್ಞಾಪನ/ ಸುತ್ತೋಲೆಗಳಲ್ಲಿ ಈಗಾಗಲೇ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡಲಾಗಿದೆ.

4. ಆದುದರಿಂದ, ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಿಗಳಿಗೆ ಸೂಚಿಸಲಾಗಿದೆ :-

**(1) ಬ್ಯಾಕ್‌ಲಾಗ್ ಹುದ್ದೆಗಳನ್ನು ಆದ್ಯತೆಯ ಮೇರೆಗೆ ಒಂದು ತಿಂಗಳೊಳಗಾಗಿ ಭರ್ತಿ ಮಾಡಲು ಕ್ರಮವಹಿಸುವುದು;**

**(2) ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದೆ ಮೀಸಲಾತಿ ನಿಯಮಗಳನ್ನು ಉಲ್ಲಂಘಿಸಿರುವ ಅನುದಾನಿತ ಶಿಕ್ಷಣ ಸಂಸ್ಥೆಗಳು, ಸಹಕಾರ ಸಂಸ್ಥೆಗಳಿಗೆ ನೀಡುವ ಅನುದಾನವನ್ನು ತಡೆಹಿಡಿಯಲು ಉನ್ನತ ಶಿಕ್ಷಣ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ಹಾಗೂ ಸಹಕಾರ ಇಲಾಖೆಗಳು ನಿಯಮಾನುಸಾರ ಕ್ರಮ ಕೈಗೊಳ್ಳುವುದು;**

**(3) ಬ್ಯಾಕ್‌ಲಾಗ್ ಹುದ್ದೆಗಳ ಬಗ್ಗೆ ನಿಖರವಾದ ಮಾಹಿತಿಯನ್ನು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು ದೃಢೀಕರಿಸಿ, ಲಿಖಿತವಾಗಿ ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸುವುದು;**

**(4) ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಅಧಿಸೂಚನೆಯನ್ನು ರಾಜ್ಯ ಘಟ್ಟದಲ್ಲಿ ಹೆಚ್ಚು ಪ್ರಸಾರ ಹೊಂದಿರುವ ಕನಿಷ್ಠ ಎರಡು ದಿನಪತ್ರಿಕೆಗಳಲ್ಲಿ ಜಾಹೀರಾತು ನೀಡುವುದು;**

**(5) ರೋಸ್ಟರ್ ವಹಿ ಮತ್ತು ವೇಕೆನ್ಸಿ ವಹಿಯನ್ನು ಸಲ್ಲಿಸದೇ ಇರುವ ಇಲಾಖೆಗಳು ಕೂಡಲೇ ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸುವುದು;**

27/12/18

..3..

5. ಮೇಲ್ಕಂಡ ಸೂಚನೆಗಳನ್ನು ಕಾರ್ಯಗತಗೊಳಿಸಿದ ಬಗ್ಗೆ ಸಚಿವ ಸಂಪುಟ ಉಪ ಸಮಿತಿಯು ಆಗಿಂದಾಗ್ಗೆ ಉಸ್ತುವಾರಿ ಮಾಡುವುದರಿಂದ ಮೇಲ್ಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಮತ್ತೊಮ್ಮೆ ಸೂಚಿಸಲಾಗಿದೆ.

27/12/18

(ಎಸ್.ಆರ್. ಬಸವರಾಜಯ್ಯ)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು–ಎ) ನಂ. 31, ವಿಧಾನ ಸೌಧ, ಬೆಂಗಳೂರು ಇವರಿಗೆ ಒದಗಿಸಬೇಕೆಂದು ಕೋರಿದೆ.

**ಪ್ರತಿ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು
2. ಎಲ್ಲಾ ಇಲಾಖಾ ಮುಖ್ಯಸ್ಥರು ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು/ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು.
3. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ: ವಿಧಾನ ಪರಿಷತ್ತು, ವಿಧಾನ ಸಭೆ, ಬೆಂಗಳೂರು
4. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
5. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
6. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ ಬೆಂಗಳೂರು.
8. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ.
9. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.